**Bangalore**
**Regional News**
**22.02.2025 / 6.40 p.m.**
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ರಾಜ್ಯದ ಪ್ರತಿ ಜಿಲ್ಲೆಗಳಲ್ಲಿ ಹಂತ ಹಂತವಾಗಿ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ನಿರ್ಮಾಣ - ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

೨. ಮನ್ ಕಿ ಬಾತ್‌ನಲ್ಲಿ ರಾಜ್ಯದ ಕೃಷಿ ಉತ್ಪನ್ನಗಳ ಉಲ್ಲೇಖ ; ರುಚಿ ಹಾಗೂ ಗುಣಮಟ್ಟದ ಕುರಿತು ಪ್ರಧಾನಿ ಶ್ಲಾಘನೆ

೩. ಚಿಕ್ಕಬಳ್ಳಾಪುರದಲ್ಲಿ ನಾಳೆ ಕೆಪಿಸಿಸಿ ನೇತೃತ್ವದ ನರೇಗಾ ಬಚಾವೋ ಬೃಹತ್ ಆಂದೋಲನ; ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಭಾಗಿಯಾಗುವ ನಿರೀಕ್ಷೆ

೪. ಬಂಡೀಪುರದಲ್ಲಿ ವನ್ಯಜೀವಿ ಸಫಾರಿ ಪುನರಾರಂಭ - ಪ್ರವಾಸಿಗರಿಂದ ಅರಣ್ಯ ದರ್ಶನ

<><><><>

ಉತ್ತರಕನ್ನಡ ಜಿಲ್ಲಾ ಪ್ರವಾಸ ಕೈಗೊಂಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದು ಕಾರವಾರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಆವರಣದಲ್ಲಿ ನಿರ್ಮಿಸಿರುವ "೪೫೦ ಹಾಸಿಗೆಗಳ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆ ಕಟ್ಟಡವನ್ನು ಉದ್ಘಾಟಿಸಿದರು.ಇದೇ ವೇಳೆ ಅವರು, ಯಲ್ಲಾಪುರ ತಾಲ್ಲೂಕಿನ ಖಾನಾಪುರ ತಾಳಗುಪ್ಪ ರಾಜ್ಯ ಹೆದ್ದಾರಿ ೯೩ ರಲ್ಲಿನ ಸೇತುವೆ ನಿರ್ಮಾಣ ಕಾಮಗಾರಿ, ಯಲ್ಲಾಪುರ ಪಟ್ಟಣದ ನಿರೀಕ್ಷಣಾ ಮಂದಿರದ ಹೊಸ ಕಟ್ಟಡದ ನಿರ್ಮಾಣ ಹಾಗೂ ಮುಂಡಗೋಡ ತಾಲ್ಲೂಕಿನ ಹೊಸ ಪ್ರವಾಸಿ ಮಂದಿರ ನಿರ್ಮಾಣ ಕಾಮಗಾರಿಗಳ ಉದ್ಘಾಟನೆಯನ್ನು ನೆರವೇರಿಸಿದರು. ಈ ವೇಳೆ ಮಾತನಾಡಿದ ಮುಖ್ಯಮಂತ್ರಿ, ಬಡವರು ಹಾಗೂ ಜನ ಸಾಮಾನ್ಯರಿಗೆ ಅನುಕೂಲವಾಗುವ ದೃಷ್ಟಿಯಿಂದ ರಾಜ್ಯದ ಪ್ರತಿ ಜಿಲ್ಲೆಗಳಲ್ಲಿ ಹಂತ ಹಂತವಾಗಿ ಸೂಪರ್ ಸ್ಪೆಶಾಲಿಟಿ ಆಸ್ಪತ್ರೆ ನಿರ್ಮಿಸಲಾಗುವುದು. ಉತ್ತರಕನ್ನಡ ಜಿಲ್ಲೆಯ ಜನತೆಯ ಬಹುದಿನಗಳ ಬೇಡಿಕೆಯಾದ ಸೂಪರ್ ಸ್ಪೇಶಲಿಟಿ ಆಸ್ಪತ್ರೆಯನ್ನು ಈ ಬಾರಿಯ ಅಯವ್ಯಯದಲ್ಲಿ ಪ್ರಕಟಿಸಲಾಗುವುದು. ಈ ಆಸ್ಪತ್ರೆ ಮುಂದಿನ ವರ್ಷ ಜನತೆಯ ಸೇವೆಗೆ ದೊರಕಲಿದೆ ಎಂದು ಭರವಸೆ ನೀಡಿದರು.ಈವರೆಗೆ ಉತ್ತರಕನ್ನಡ ಜಿಲ್ಲೆಯಲ್ಲಿ ೨ ಸಾವಿರದ ೯೫೪ ಕೋಟಿ ರೂಪಾಯಿ ಗ್ಯಾರಂಟಿ ಯೋಜನೆಗೆ ಖರ್ಚು ಮಾಡಲಾಗಿದೆ ಎಂದರು.ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿ, ರಾಜ್ಯ

ವೈದ್ಯಕೀಯ ಕಾಲೇಜುಗಳ ಸಂಖ್ಯೆ ಹೆಚ್ಚಿಸಲಾಗಿದೆ. ಇದರಿಂದ ವೈದ್ಯಕೀಯ ಶಿಕ್ಷಣ ಪಡೆಯುವವರ ಸಂಖ್ಯೆ ಹೆಚ್ಚಿದೆ ಎಂದರು. ರಾಜ್ಯದಲ್ಲಿ ಸುಮಾರು ೩೦೦ ಕೀಲೋ ಮೀಟರ್ ಕ್ಕಿಂತ ಹೆಚ್ಚು ಉದ್ದದ ಕರಾವಳಿ ಇದ್ದು, ಇಲ್ಲಿನ ಪ್ರವಾಸೋದ್ಯಮ ಕ್ಷೇತ್ರಕ್ಕೆ ಹೆಚ್ಚಿನ ಶಕ್ತಿ ತುಂಬಲು ಹೊಸ ಪ್ರವಾಸೋದ್ಯಮ ನೀತಿ ರೂಪಿಸಲಾಗುವುದು ಎಂದರು.ಉದ್ಘಾಟನೆಯ ಸಂದರ್ಭದಲ್ಲಿ ಸಚಿವರಾದ ಶರಣಪ್ರಕಾಶ್ ಪಾಟೀಲ್, ಮಂಕಾಳ ವೈದ್ಯ, ಶಾಸಕರಾದ ಶಿವರಾಂ ಹೆಬ್ಬಾರ್, ಸತೀಶ್ ಸೈಲ್, ಭೀಮಣ್ಣ ನಾಯ್ಕ, ಮಾಜಿ ಸಚಿವರೂ ಶಾಸಕರಾದ ಆರ್.ವಿ.ದೇಶಪಾಂಡೆ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು.ಇದಕ್ಕೂ ಮುನ್ನ, ಅಂಕೋಲಾ ತಾಲೂಕಿನ ಮಂಜಗುಣಿ ಗ್ರಾಮದಲ್ಲಿ ಗಂಗಾವಳಿ ನದಿಗೆ ಅಡ್ಡಲಾಗಿ ನಿರ್ಮಿಸಲಾಗಿರುವ ನೂತನ ಸೇತುವೆಯನ್ನು ಉದ್ಘಾಟಿಸಿದರು. ೩೪ ಕೋಟಿ ೨೧ ಲಕ್ಷ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿರುವ ಈ ಸೇತುವೆ, ಅಂಕೋಲಾ ಮತ್ತು ಕುಮುಟಾ ತಾಲೂಕಿನ ಮಂಜಗುಣಿ ಮತ್ತು ಗಂಗಾವಳಿ ಗ್ರಾಮಗಳ ನಡುವೆ ಸುಗಮ ಸಂಪರ್ಕ ಕಲ್ಪಿಸಲಿದ್ದು, ಈ ಭಾಗದ ಜನರ ಬಹುದಿನಗಳ ಸಂಚಾರ ಸಮಸ್ಯೆಯನ್ನು ನೀಗಿಸಲಿದೆ.

<><><><>

ಪ್ರಧಾನಿ ನರೇಂದ್ರ ಮೋದಿ ತಮ್ಮ ೧೩೧ನೇ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿಂದು ಭಾರತದ ತಾಂತ್ರಿಕ ಪ್ರಗತಿ, ಕೃಷಿ ಕ್ಷೇತ್ರದಲ್ಲಾಗಿರುವ ಸಾಧನೆಗಳು ಮತ್ತು ಸಾಂಸ್ಕೃತಿಕ ಅಂಶಗಳ ಮೇಲೆ ವಿಶೇಷ ಗಮನ ಹರಿಸಿದರು.ಪ್ರಧಾನಿಯವರು ತಮ್ಮ ಭಾಷಣದಲ್ಲಿ ಇಂದು ರಾಜ್ಯದ ಕೃಷಿ ಸಾಧನೆಯನ್ನು ವಿಶೇಷವಾಗಿ ಉಲ್ಲೇಖಿಸಿ ಶ್ಲಾಘಿಸಿದರು. ನಮ್ಮ ದೇಶದ ರೈತರು ಇಂದು ಕೇವಲ ಉತ್ಪಾದನೆಗೆ ಸೀಮಿತವಾಗದೆ, ಗುಣಮಟ್ಟ ಮತ್ತು ಮೌಲ್ಯವರ್ಧನೆಗೆ ಹೆಚ್ಚಿನ ಒತ್ತು ನೀಡುತ್ತಿದ್ದಾರೆ ಎಂದರು.ಈ ನಿಟ್ಟಿನಲ್ಲಿ ರಾಜ್ಯದ ಉತ್ಪನ್ನಗಳಾದ ನಂಜನಗೂಡಿನ ರಸಬಾಳೆ, ಮೈಸೂರಿನ ವೀಳ್ಯದೆಲೆ ಮತ್ತು ಇಂಡಿ ನಿಂಬೆಹಣ್ಣುಗಳು ತಮ್ಮ ವಿಶಿಷ್ಟ ರುಚಿ ಮತ್ತು ಗುಣಮಟ್ಟದಿಂದಾಗಿ ಜಿಐ ಟ್ಯಾಗ್ ಪಡೆದುಕೊಂಡಿವೆ. ಈ ಉತ್ಪನ್ನಗಳು ಈಗ ಮಾಲ್ಡೀವ್ಸ್‌ಗೆ ರಫ್ತಾಗುತ್ತಿರುವುದು ರಾಜ್ಯದ ರೈತರ ಕಠಿಣ ಪರಿಶ್ರಮಕ್ಕೆ ಸಿಕ್ಕ ಜಾಗತಿಕ ಮನ್ನಣೆಯಾಗಿದೆ ಎಂದು ಅವರು ಬಣ್ಣಿಸಿದರು. ಪ್ರಧಾನಿ ನರೇಂದ್ರ ಮೋದಿ ರಾಜ್ಯದ ಕೃಷಿ ಉತ್ಪನ್ನಗಳ ಬಗ್ಗೆ ಮಾತನಾಡಿರುವುದಕ್ಕೆ ರಾಜ್ಯದ ಕೃಷಿಕರು ಸಂತಸ ವ್ಯಕ್ತಪಡಿಸಿದ್ದಾರೆ. ಚಾಮರಾಜನಗರದ ರಸಬಾಳೆ ಕೃಷಿಕ ಯೋಗೇಶ್ ಪ್ರಭುಸ್ವಾಮಿ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ವಿಜಯಪುರದ ಇಂಡಿ ತಾಲೂಕಿನ ಲಿಂಬೆ ಬೆಳೆಗಾರ ಸೋಮಣ್ಣ ಕರೂರು ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ : ಸೋಮಣ್ಣ ಕರೂರು

ವಿಜಯಪುರದ ಮತ್ತೊರ್ವ ಲಿಂಬೆ ಬೆಳೆಗಾರ ತಮ್ಮಣ್ಣ ಪೂಜಾರಿ ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

ಧ್ವನಿ : ತಮ್ಮಣ್ಣ ಪೂಜಾರಿ

ಪ್ರಧಾನಿ ನರೇಂದ್ರ ಮೋದಿ ಅವರ ಮಾಸಿಕ ರೇಡಿಯೋ ಕಾರ್ಯಕ್ರಮ ಮನ್ ಕೀ ಬಾತ್ ೧೩೧ನೇ ಸಂಚಿಕೆಯನ್ನು ಯಾದಗಿರಿ ವಿಧಾನಸಭಾ ಕ್ಷೇತ್ರದ ನಾಯ್ಕಲ್ ಗ್ರಾಮದಲ್ಲಿಂದು ವೀಕ್ಷಿಸಲಾಯಿತು.

<><><>

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ-ಕೆಪಿಸಿಸಿ ನಾಳೆ ಬೆಳಗ್ಗೆ ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರದಲ್ಲಿ ನರೇಗಾ ಬಚಾವೋ ಬೃಹತ್ ಆಂದೋಲನವನ್ನು ಹಮ್ಮಿಕೊಂಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಸಚಿವ ಸಂಪುಟದ ಸಚಿವರು ಹಾಗೂ ಪಕ್ಷದ ಹಿರಿಯ ಮುಖಂಡರು ಭಾಗವಹಿಸಲಿದ್ದಾರೆ.  ನರೇಗಾ ಬಚಾವೋ ಆಂದೋಲನದ ಬೃಹತ್ ವೇದಿಕೆ ಕಾರ್ಯಕ್ರಮಕ್ಕೆ ಕೆಪಿಸಿಸಿ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಂಡಿದ್ದು, ಚಿಕ್ಕಬಳ್ಳಾಪುರ ನಗರ ಹೊರವಲಯದ ಚಿಕ್ಕಬಳ್ಳಾಪುರ-ಬೆಂಗಳೂರು ರಾಷ್ಟ್ರೀಯ ಹೆದ್ದಾರಿಯ ಚದುಲಪುರ ಬಳಿ ಬೃಹತ್ ವೇದಿಕೆ ಮತ್ತು ನೆರಳಿನ ವ್ಯವಸ್ಥೆ ಮಾಡಲಾಗಿದೆ. ಕಾರ್ಯಕ್ರಮದ ಹಿನ್ನೆಲೆಯಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ಮತ್ತು ಜಿಲ್ಲಾಧಿಕಾರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ಹಿರಿಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

<><><>

ಮಾನವ-ವನ್ಯಜೀವಿ ಸಂಘರ್ಷ ಹಿನ್ನೆಲೆ ಸ್ಥಗಿತಗೊಂಡಿದ್ದ ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ತಾಲೂಕಿನ ಬಂಡೀಪುರ ವನ್ಯಜೀವಿ ಸಫಾರಿ ಇಂದು ಮಧ್ಯಾಹ್ನದಿಂದ ಆರಂಭಗೊಂಡಿದೆ.ಇಂದು ಭಾನುವಾರ ರಜಾ ದಿನವಾದ ಪರಿಣಾಮ ಮೊದಲ ದಿನವೇ ಸಫಾರಿಗರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ಕೊಟ್ಟಿದ್ದು, ನಾಲ್ಕು ಬಸ್ ಹಾಗೂ ೨ ಕ್ಯಾಂಪರ್ ವಾಹನದಲ್ಲಿ ಮಧ್ಯಾಹ್ನದ ಸಫಾರಿ ನಡೆಯಿತು.ಗೋಪಾಲಸ್ವಾಮಿ ಬೆಟ್ಟ ವಲಯ ಅರಣ್ಯಾಧಿಕಾರಿ ಮಲ್ಲೇಶ್, ಈ ಕುರಿತು ಇಲಾಖೆ ಆದೇಶದನ್ವಯ ಷರತ್ತುಗಳನ್ನು ಪಾಲಿಸಿ ೬ ವಾಹನಗಳಲ್ಲಿ ವನ್ಯಜೀವಿ ಸಫಾರಿ ನಡೆಸಲಾಗಿದೆ. ಪ್ರವಾಸಿಗರಿಂದಲೂ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><><>

ವಿದ್ಯಾರ್ಥಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಮೂಲಭೂತ ಸೌಕರ್ಯಗಳ ಜೊತೆಗೆ ಓದಲು ಉತ್ತಮ ವಾತಾವರಣ ಕಲ್ಪಿಸಲಾಗಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ಗುಣಮಟ್ಟದ ವಿದ್ಯಾಭ್ಯಾಸ ಪಡೆದುಕೊಳ್ಳಬೇಕಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್ ಮುನಿಯಪ್ಪ ಹೇಳಿದ್ದಾರೆ. ದೇವನಹಳ್ಳಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಪಟ್ಟಣದಲ್ಲಿ ೭ ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ ನಿರ್ಮಿಸಿರುವ ಡಾ.ಬಿ.ಆರ್ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಹಾಗೂ ಬಾಲಕಿಯರ ವಿದ್ಯಾರ್ಥಿ ನಿಲಯದ ನೂತನ ಕಟ್ಟಡದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು. ಈ ಹಿಂದೆ ರಾಜ್ಯ ಸರ್ಕಾರ ಹೋಬಳಿಗೊಂದು ವಸತಿ ಶಾಲೆ ಸ್ಥಾಪಿಸಲು ತೀರ್ಮಾನಿಸಿತ್ತು, ಅದರಂತೆ ಈಗ ಎಲ್ಲಾ ಹೋಬಳಿಗಳಲ್ಲಿ ವಸತಿ ಶಾಲೆ ಜೊತೆಗೆ ಹಾಸ್ಟೆಲ್ ಸೌಲಭ್ಯ ಕಲ್ಪಿಸಲಾಗಿದೆ. ಹಾಸ್ಟೆಲ್‌ನಲ್ಲಿ ಗುಣಮಟ್ಟದ ಆಹಾರ, ಊಟ ಒದಗಿಸಲಾಗುವ ಜೊತೆಗೆ ಪರಿಣಿತ ಶಿಕ್ಷಕರಿಂದ ಬೋಧನೆ ದೊರೆಯಲಿದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದ್ದಾರೆ.

<><><><>

ಧಾರವಾಡ ಲೋಕಸಭಾ ಕ್ಷೇತ್ರದ 'ಸಂಸದ ಕ್ರೀಡಾ ಮಹೋತ್ಸವ ೨೦೨೫-೨೬' ಅಂಗವಾಗಿ, ಈ ತಿಂಗಳ ೨೮ ಹಾಗೂ ಮಾರ್ಚ್ ೧ ರಂದು ಲೋಕಸಭಾ ಕ್ಷೇತ್ರ ಮಟ್ಟದ ಕುಸ್ತಿ ಪಂದ್ಯಾವಳಿಗಳನ್ನು, ನಗರದ ಕರ್ನಾಟಕ ಮಹಾವಿದ್ಯಾಲಯದ ಮೈದಾನದಲ್ಲಿ ಆಯೋಜಿಸಲಾಗಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ.

<><><><>